# Akashvani : Bangalore
# National Bulletin In Kannada
# 13.05.2024 / 13.10 hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**13.05.2024 / 13.10 hrs**

<><*<><>*><>

**ಮುಖ್ಯಾಂಶಗಳು**

೧. ಲೋಕಸಭಾ ಚುನಾವಣೆ ; ನಾಲ್ಕನೇ ಹಂತದಲ್ಲಿ ೯೬ ಕ್ಷೇತ್ರಗಳಲ್ಲಿ ಮತದಾನ ಪ್ರಗತಿ

೨. ವಾರಾಣಸಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ನಾಮಪತ್ರ ಸಲ್ಲಿಕೆ

೩. ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ಭಾರೀ ಮಳೆ ಸಾಧ್ಯತೆ ; ಹವಾಮಾನ ಇಲಾಖೆ ಮುನ್ಸೂಚನೆ

೪. ಐಪಿಎಲ್ ಕ್ರಿಕೆಟ್ : ಇಂದು ಗುಜರಾತ್ ಟೈಟನ್ಸ್ - ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳ ನಡುವೆ ಹಣಾಹಣಿ

<><*<><>*><>

ನಾಲ್ಕನೇ ಹಂತದ ಲೋಕಸಭಾ ಚುನಾವಣೆಗೆ ಮತದಾನ ಪ್ರಗತಿಯಲ್ಲಿದ್ದು, ಬೆಳಿಗ್ಗೆ ೧೧ ಗಂಟೆ ಸುಮಾರಿಗೆ ಶೇಕಡ ೨೫ರಷ್ಟು ಮತದಾನವಾಗಿರುವ ಬಗ್ಗೆ ವರದಿಯಾಗಿದೆ. ಪಶ್ಚಿಮ ಬಂಗಾಳದಲ್ಲಿ ಶೇಕಡ ೩೩, ಮಧ್ಯಪ್ರದೇಶದಲ್ಲಿ ಶೇಕಡ ೩೨, ಉತ್ತರಪ್ರದೇಶ-ಜಾರ್ಖಂಡ್‌ನಲ್ಲಿ ಶೇಕಡ ೨೭, ತೆಲಂಗಾಣ ಶೇಕಡ ೨೪, ಆಂಧ್ರಪ್ರದೇಶ-ಒಡಿಶಾದಲ್ಲಿ ಶೇಕಡ ೨೩, ಬಿಹಾರದಲ್ಲಿ ಶೇಕಡ ೨೨, ಮಹಾರಾಷ್ಟ್ರದಲ್ಲಿ ಶೇಕಡ ೧೭ ರಷ್ಟು ಮತದಾನವಾಗಿರುವ ಬಗ್ಗೆ ವರದಿಯಾಗಿದೆ. ೯ ರಾಜ್ಯಗಳು ಹಾಗೂ ೧ ಕೇಂದ್ರಾಡಳಿತ ಪ್ರದೇಶದಲ್ಲಿ ಹರಡಿಕೊಂಡಿರುವ ೯೬ ಲೋಕಸಭಾ ಕ್ಷೇತ್ರಗಳಲ್ಲಿ, ಆಂಧ್ರಪ್ರದೇಶದ ೨೫, ತೆಲಂಗಾಣದ ೧೫, ಉತ್ತರಪ್ರದೇಶದ ೧೩, ಮಹಾರಾಷ್ಟ್ರದ ೧೧, ಮಧ್ಯಪ್ರದೇಶ ಹಾಗೂ ಪಶ್ಚಿಮ ಬಂಗಾಳದ ತಲಾ ೮, ಬಿಹಾರದ ೫, ಜಾರ್ಖಂಡ್ ಹಾಗೂ ಒಡಿಶಾದ ತಲಾ ೪ ಕ್ಷೇತ್ರಗಳು ಹಾಗೂ ಕೇಂದ್ರಾಡಳಿತ ಪ್ರದೇಶದ ಜಮ್ಮು-ಕಾಶ್ಮೀರದ ೧ ಕ್ಷೇತ್ರದಲ್ಲಿ ಮತದಾನ ನಡೆಯುತ್ತಿದೆ. ಬೆಳಿಗ್ಗೆ ೭ ಗಂಟೆಗೆ ಮತದಾನ ಆರಂಭವಾಗಿದ್ದು, ಸಂಜೆ ೬ ಗಂಟೆಗೆ ಮುಕ್ತಾಯಗೊಳ್ಳಲಿದೆ. ತೆಲಂಗಾಣದ ೧೭ ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯ ಕೆಲ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಲು ಮತದಾನದ ಅವಧಿಯನ್ನು ವಿಸ್ತರಿಸಲಾಗಿದೆ ಎಂದು ಚುನಾವಣೆ ಆಯೋಗ ಹೇಳಿದೆ. ವಿವಿಧ ಕ್ಷೇತ್ರಗಳಲ್ಲಿ ಸಂಚರಿಸುತ್ತಿರುವ ನಮ್ಮ ಬಾತ್ಮೀದಾರರು ಮತಗಟ್ಟೆಗಳ ಬಳಿ ಮತದಾರರು ಸರದಿ ಸಾಲಿನಲ್ಲಿ ನಿಂತಿದ್ದು, ಮಹಿಳೆಯರು ಹಾಗೂ ಯುವಕರು ಮತದಾನ ಮಾಡಲು ಉತ್ಸುಕವಾಗಿರುವುದು ಕಂಡು ಬರುತ್ತಿದೆ ಎಂದು ವರದಿ ಮಾಡಿದ್ದಾರೆ. ನಾಲ್ಕನೇ ಹಂತದ ಚುನಾವಣೆಯಲ್ಲಿ ಒಟ್ಟು ೧ ಸಾವಿರದ ೭೧೭ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಬಿಜೆಪಿ ನಾಯಕರಾದ ಗಿರಿರಾಜ್ ಸಿಂಗ್, ಅರ್ಜುನ್ ಮುಂಡಾ, ಜಿ. ಕಿಶನ್ ರೆಡ್ಡಿ,

ಅಜಯ್ ಕುಮಾರ್ ಮಿಶ್ರಾ ಹಾಗೂ ಜೆಡಿಯು ನ ರಾಜೀವ್ ರಂಜನ್ ಸಿಂಗ್, ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್, ಕಾಂಗ್ರೆಸ್ ನಾಯಕ ಅದೀರ್ ರಂಜನ್ ಚೌಧರಿ, ತೃಣಮೂಲ ಕಾಂಗ್ರೆಸ್‌ನ ಮಹುವಾ ಮೊಯಿತ್ರಾ, ಶತ್ರುಘ್ನ ಸಿನ್ಹಾ ಹಾಗೂ ಎಐಎಂಐಎಂನ ಅಸಾದುದ್ದೀನ್, ಓವೈಸಿ ಸೇರಿದಂತೆ ಹಲವು ಪ್ರಮುಖರ ರಾಜಕೀಯ ಭವಿಷ್ಯವನ್ನು ಮತದಾರರು ಇಂದು ನಿರ್ಧರಿಸಲಿದ್ದಾರೆ. ಒಂದು ಲಕ್ಷ ೯೨ ಸಾವಿರದ ಮತಗಟ್ಟೆಗಳಿಗೆ ಸುಮಾರು ೧೯ ಲಕ್ಷ ಚುನಾವಣಾ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ಸುಮಾರು ೧೮ ಕೋಟಿ ಮತದಾರರು ತಮ್ಮ ಹಕ್ಕು ಚಲಾಯಿಸಲು ಅರ್ಹತೆ ಪಡೆದುಕೊಂಡಿದ್ದಾರೆ. ಸುಗಮ ಮತದಾನಕ್ಕಾಗಿ ಚುನಾವಣಾ ಆಯೋಗ ಎಲ್ಲ ವ್ಯವಸ್ಥೆಗಳನ್ನು ಕೈಗೊಂಡಿದೆ. ಮತಗಟ್ಟೆಗಳ ಬಳಿ ಕುಡಿಯುವ ನೀರು, ನೆರಳು, ವಿಶೇಷಚೇತನರಿಗೆ ರ್‍ಯಾಂಪ್‌ಗಳು, ಸ್ವಯಂ ಸೇವಕರ ಸಹಾಯ ಹಾಗೂ ಗಾಲಿ ಕುರ್ಚಿಗಳನ್ನು ಕಲ್ಪಿಸಲಾಗಿದೆ. ಈವರೆಗೆ ನಡೆದ ಕಳೆದ ೩ ಹಂತಗಳಲ್ಲಿ ೨೦ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ಹರಡಿಕೊಂಡಿರುವ ೨೮೩ ಲೋಕಸಭಾ ಕ್ಷೇತ್ರಗಳಲ್ಲಿ ಸುಗಮವಾಗಿ ಚುನಾವಣೆ ನಡೆಸಲಾಗಿದೆ. ಜೊತೆಗೆ ಆಂಧ್ರಪ್ರದೇಶ ವಿಧಾನಸಭೆಯ ೧೭೫ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಹಾಗೂ ಒಡಿಶಾದ ವಿಧಾನಸಭೆ ಚುನಾವಣೆಯ ಮೊಲದ ಹಂತದಲ್ಲಿ ೨೮ ಕ್ಷೇತ್ರಗಳಿಗೆ ಇಂದು ಚುನಾವಣೆ ನಡೆಯುತ್ತಿದೆ.

<><*<><>*><>

ಲೋಕಸಭಾ ಚುನಾವಣೆಗಳ ಉಳಿದ ಹಂತಗಳಿಗಾಗಿ ಪ್ರಚಾರ ಕಾರ್ಯ ಬಿರುಸುಗೊಂಡಿದೆ. ಬಿಜೆಪಿ ಹಿರಿಯ ಧುರೀಣ, ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು ಬಿಹಾರದಲ್ಲಿ ಹಲವು ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಹಾಜಿಪುರ್‌ನಲ್ಲಿ ತಮ್ಮ ಮೊದಲ ಸಾರ್ವಜನಿಕ ಸಭೆಯಲ್ಲಿ ಪ್ರಧಾನಿ, ದಿವಂಗತ ರಾಮ್‌ವಿಲಾಸ್ ಪಾಸ್ವಾನ್ ಅವರ ಪುತ್ರ ಎಲ್.ಜೆ.ಪಿ. ಮುಖ್ಯಸ್ಥ ಚಿರಾಗ್ ಪಾಸ್ವಾನ್ ಪರವಾಗಿ ಮತ ಯಾಚಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರ, ಬಿಹಾರದಲ್ಲಿ ಬಿಜೆಪಿ, ಎನ್‌ಡಿಎ ಪರ ಅಭೂತಪೂರ್ವ ಒಲವು ವ್ಯಕ್ತವಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಮೈತ್ರಿಕೂಟ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಉತ್ತರಪ್ರದೇಶದಲ್ಲಿ ಹಲವು ತಾರಾ ಪ್ರಚಾರಕರು ತಮ್ಮ ಪಕ್ಷದ ಅಭ್ಯರ್ಥಿಗಳ ಪರ ರ್‍ಯಾಲಿಗಳನ್ನು ನಡೆಸಲಿದ್ದಾರೆ. ಬಿಜೆಪಿ ಹಿರಿಯ ನಾಯಕ, ಪ್ರಧಾನಮಂತ್ರಿ  ನರೇಂದ್ರ ಮೋದಿ ವಾರಾಣಸಿಯಲ್ಲಿ ಇಂದು ಸಂಜೆ ಬೃಹತ್ ರೋಡ್ ಶೋ ನಡೆಸಲಿದ್ದು, ಎಲ್ಲರ ಕಣ್ಣು ವಾರಾಣಸಿಯತ್ತ ನೆಟ್ಟಿದೆ. ಪ್ರಧಾನಿ ಅವರು, ರಾಜ್ಯದಲ್ಲಿ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ವಾರಾಣಸಿಯಲ್ಲಿ ತಮ್ಮ ಕ್ಷೇತ್ರದ ಮತದಾರರನ್ನು ಉದ್ದೇಶಿಸಿ ಪ್ರಧಾನಿಯವರು ಬೃಹತ್ ರೋಡ್ ಶೋ ನಡೆಸುತ್ತಿರುವುದು, ಇದು ೫ನೇ ಬಾರಿಯಾಗಿದೆ. ೨೦೧೪ ಮತ್ತು ೨೦೧೯ರ ಸಂಸದೀಯ ಚುನಾವಣೆಗಳಲ್ಲಿ ಹಾಗೂ ೨೦೧೭ ಮತ್ತು ೨೦೨೨ ರ ವಿಧಾನಸಭಾ ಚುನಾವಣೆಗಳಲ್ಲಿ ಅವರು, ರೋಡ್ ಶೋಗಳನ್ನು ನಡೆಸಿದ್ದರು. ಬನಾರಸ್ ಹಿಂದೂ ವಿಶ್ವವಿದ್ಯಾಲಯದ ಹೊರಗಡೆ ಮಹಾಮನ ಮದನಮೋಹನ ಮಾಳವೀಯ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ನಂತರ ಇಂದು ಸಂಜೆ ೪ ಗಂಟೆಗೆ ೫ ಕಿಲೋಮೀಟರ್ ಉದ್ದದ ರೋಡ್ ಶೋ ನಿಗದಿಯಾಗಿದೆ. ಪ್ರಧಾನಿ ಅವರು, ಇಂದು ವಾರಾಣಸಿಯಲ್ಲಿ ತಂಗಲಿದ್ದು, ನಾಳೆ ನಾಮಪತ್ರ ಸಲ್ಲಿಸಲಿದ್ದಾರೆ.  ಮತ್ತೊಂದೆಡೆ ಮಾಜಿ ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ಅವರು, ತಮ್ಮ ಸೋದರಿ ಹಾಗೂ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಅವರೊಂದಿಗೆ ರಾಯ್‌ಬರೇಲಿಯಲ್ಲಿ ಪ್ರಚಾರ ನಡೆಸಲಿದ್ದಾರೆ.

<><*<><>*><>

ಬಿಜೆಪಿ ಹಿರಿಯ ನಾಯಕ, ಕೇಂದ್ರ ಸಚಿವ ಅಮಿತ್ ಶಾ, ಇಂದು ಮಹಾರಾಷ್ಟ್ರದ ಧುಲೆ ಮತ್ತು ಪಾಲ್ಘರ್ ಜಿಲ್ಲೆಗಳಲ್ಲಿ ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಧುಲೆಯಲ್ಲಿ ಕಾಂಗ್ರೆಸ್ ಮುಖಂಡರಾದ ಶೋಭ ಬಚ್ಛಾವ್ ವಿರುದ್ಧ ಸ್ಪರ್ಧಿಸಿರುವ ಬಿಜೆಪಿ ಅಭ್ಯರ್ಥಿ ಸುಭಾಷ್ ಬಾಮ್ರೆ ಪರವಾಗಿ ಅಮಿತ್ ಶಾ, ಪ್ರಚಾರ ನಡೆಸಲಿದ್ದಾರೆ. ಪಾಲ್ಘರ್‌ನಲ್ಲಿ ಶಿವಸೇನೆಯ ಭಾರತೀ ಕಾಮ್ಡಿ ವಿರುದ್ಧ ಸ್ಪರ್ಧಿಸಿರುವ ಬಿಜೆಪಿ ಅಭ್ಯರ್ಥಿ ಡಾ. ಹೇಮಂತ್ ಸಾವರ ಪರವಾಗಿ ಅವರು, ಪ್ರಚಾರ ನಡೆಸಲಿದ್ದಾರೆ. ಪಾಲ್ಘರ್ ಸ್ಥಾನ ಪರಿಶಿಷ್ಟ ಪಂಗಡಗಳ ಸಮುದಾಯದ ಅಭ್ಯರ್ಥಿಗಳಿಗೆ ಮೀಸಲಾಗಿದೆ.

<><*<><>*><>

ಈ ಬಾರಿಯ ಲೋಕಸಭಾ ಚುನಾವಣೆಯ ಪ್ರಮುಖ ವಿಷಯ ದೇಶದ ನಿರುದ್ಯೋಗ ಸಮಸ್ಯೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಯುವಕರೊಂದಿಗೆ ಸಂವಾದ ನಡೆಸಿದ ಅವರು, ಚುನಾವಣಾ ಪ್ರಚಾರದ ವೇಳೆ ಆಡಳಿತ ಪಕ್ಷ ನಿರುದ್ಯೋಗ ವಿಷಯವನ್ನು ಸೂಕ್ತವಾಗಿ ಪ್ರಸ್ತಾಪಿಸುತ್ತಿಲ್ಲ ಎಂದು ಆರೋಪಿಸಿದ್ದಾರೆ. ಈ ನಡುವೆ ನವದೆಹಲಿಯ ಬಿಜೆಪಿ ಕೇಂದ್ರ ಕಚೇರಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಹಿರಿಯ ಬಿಜೆಪಿ ನಾಯಕ, ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ, ಕಾಂಗ್ರೆಸ್ ಆಡಳಿತದಲ್ಲಿ ಈಶಾನ್ಯ ರಾಜ್ಯಗಳ ಜನರು ತಾರತಮ್ಯವನ್ನು ಎದುರಿಸುತ್ತಿದ್ದರು ಎಂದು ಆರೋಪಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಪ್ರಯತ್ನಗಳು ಹಾಗೂ ಪ್ರಭಾವದಿಂದಾಗಿ ಈಶಾನ್ಯದ ಜನರ ವಿರುದ್ಧ ಜನಾಂಗೀಯ ತಾರತಮ್ಯ ನಿವಾರಣೆಯಾಗಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಅರಣ್ಯ ಸಂರಕ್ಷಣೆ ಹಾಗೂ ನಿರ್ವಹಣೆಯಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದ್ದಾಗಿ ಭಾರತ ವಿಶ್ವಸಂಸ್ಥೆಗೆ ತಿಳಿಸಿದೆ. ಮೇ ೬ ರಿಂದ ೧೦ ರವರೆಗೆ ಅಮೆರಿಕದ ನ್ಯೂಯಾರ್ಕ್‌ನಲ್ಲಿ ಜರುಗಿದ ವಿಶ್ವಸಂಸ್ಥೆಯ ಅರಣ್ಯ ವೇದಿಕೆಯ ೧೪ನೇ ಮಹಾ ಅಧಿವೇಶನದಲ್ಲಿ ಈ ವರದಿ ಸಲ್ಲಿಸಿದೆ. ಜಾಗತಿಕವಾಗಿ ಅರಣ್ಯ ಸಂರಕ್ಷಣೆಯಲ್ಲಿ ಭಾರತ ೩ನೇ ಸ್ಥಾನದಲ್ಲಿದೆ. ಕಳೆದ ೧೫ ವರ್ಷಗಳಲ್ಲಿ ಅರಣ್ಯ ಸಂರಕ್ಷಣೆ ಹಾಗೂ ನಿರ್ವಹಣೆಯಲ್ಲಿ ಭಾರತ ದೊಡ್ಡ ಪ್ರಗತಿ ಸಾಧಿಸಿದೆ ಎಂದು ತಿಳಿಸಿದೆ. ಪ್ರಾಜೆಕ್ಟ್ ಟೈಗರ್ ಯೋಜನೆಗೆ ೫೦ ವರ್ಷ ಹಾಗೂ ಪ್ರಾಜೆಕ್ಟ್ ಎಲೆಫೆಂಟ್ ಯೋಜನೆಗೆ ೩೦ ವರ್ಷಗಳಾಗಿದ್ದು, ಈ ಎರಡೂ ಮಹತ್ವದ ಯೋಜನೆಗಳು ಭಾರತದಲ್ಲಿ ಅರಣ್ಯ, ವನ್ಯಜೀವಿ ಸಂರಕ್ಷಣೆಯ ನಿಟ್ಟಿನಲ್ಲಿ ಭಾರೀ ಯಶಸ್ಸು ಕಂಡಿವೆ ಎಂದು ಹೇಳಿದೆ.

<><*<><>*><>

ತಮಿಳುನಾಡಿನಲ್ಲಿ ನಾಗಪಟ್ಟಣಂನ ಸಂಸದ ಎಂ. ಸೆಲ್ವರಸು ಇಂದು ಮುಂಜಾನೆ ಚೆನ್ನೈನಲ್ಲಿ ನಿಧನರಾಗಿದ್ದಾರೆ. ಅವರಿಗೆ ೬೭ ವರ್ಷ ವಯಸ್ಸಾಗಿತ್ತು. ಅನಾರೋಗ್ಯಕ್ಕಾಗಿ ಚೆನ್ನೈನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ನಾಲ್ಕು ಬಾರಿ ಸಂಸದರಾಗಿದ್ದ ಸೆಲ್ವರಸು ಅವರು, ಸಿಪಿಐನ ಹಿರಿಯ ಸದಸ್ಯರಾಗಿದ್ದು, ನಾಗಪಟ್ಟಣಂನಿಂದ ೧೯೮೯, ೧೯೯೬, ೧೯೯೮, ೨೦೧೯ರಲ್ಲಿ ಚುನಾಯಿತರಾಗಿದ್ದರು. ರೈತ ಸಂಬಂಧಿ ಸಮಸ್ಯೆಗಳ ಪರಿಹಾರಕ್ಕಾಗಿ ಸದಾ ಮುಂಚೂಣಿಯಲ್ಲಿ ನಿಲ್ಲುತ್ತಿದ್ದರು. ಮತ್ತು ಡೆಲ್ಟಾ ಜಿಲ್ಲೆಗಳಿಗೆ ರೈಲು ಸಂಪರ್ಕ ಕಲ್ಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಅತಿ

ಚಿಕ್ಕವಯಸ್ಸಿನಲ್ಲಿಯೇ ಕಮ್ಯೂನಿಸ್ಟ್ ಪಕ್ಷಕ್ಕೆ ಸೇರ್ಪಡೆಯಾಗಿದ್ದ ಅವರು, ಡೆಲ್ಟಾ ಜಿಲ್ಲೆಗಳಲ್ಲಿ ಹಲವು ಚಳವಳಿಗಳಿಗೆ ಮುಂದಾಳತ್ವ ವಹಿಸಿದ್ದರು.

<><*<><>*><>

ಕರ್ನಾಟಕ ಸೇರಿದಂತೆ ಆಂಧ್ರಪ್ರದೇಶದ ಕರಾವಳಿ, ಯಾನಂ, ತೆಲಂಗಾಣ, ಒಡಿಶಾ, ತಮಿಳುನಾಡು, ಪುದುಚೇರಿ, ಕಾರೈಕಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ ಎರಡು ಮೂರು ದಿನಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಧ್ಯಪ್ರದೇಶ, ಜಾರ್ಖಂಡ್, ಪಶ್ಚಿಮ ಬಂಗಾಳ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಹಾಗೂ ದಕ್ಷಿಣ ಮತ್ತು ಈಶಾನ್ಯ ಪ್ರದೇಶಗಳು ಸೇರಿದಂತೆ ಭಾರತದ ಬಹುತೇಕ ಭಾಗಗಳಲ್ಲಿ ಮುಂದಿನ ಎರಡು ಮೂರು ದಿನಗಳ ಕಾಲ ಗುಡುಗು, ಮಿಂಚು, ಬಿರುಗಾಳಿ ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಮುಂದಿನ ಎರಡು ದಿನಗಳಲ್ಲಿ ಜಮ್ಮು - ಕಾಶ್ಮೀರ - ಲಡಾಖ್ - ಗಿಲ್ಗಿಟ್ - ಬಾಲ್ಟಿಸ್ತಾನ್ - ಮುಜಾಫರಾಬಾದ್, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಬೀಸುವ ಸಾಧ್ಯತೆಯಿದೆ. ಉತ್ತರ ಪ್ರದೇಶ ಮತ್ತು ರಾಜಸ್ಥಾನದ ಪ್ರತ್ಯೇಕ ಸ್ಥಳಗಳಲ್ಲಿ ಧೂಳಿನ ಬಿರುಗಾಳಿ ಮತ್ತು ಬಿರುಗಾಳಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೫ ದಿನಗಳಲ್ಲಿ ಸೌರಾಷ್ಟ್ರ ಮತ್ತು ಕಛ್‌ನ ಕರಾವಳಿ ಭಾಗಗಳಲ್ಲಿ ಬಿಸಿ ಮತ್ತು ಆರ್ದ್ರ ವಾತಾವರಣವು ಮೇಲುಗೈ ಸಾಧಿಸುವ ಸಾಧ್ಯತೆಯಿದೆ.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್ ೨೦೨೪ ರಲ್ಲಿ ಭಾರತದ ಆರು ಮಂದಿ ಕುಸ್ತಿ ಪಟುಗಳು ಪಾಲ್ಗೊಳ್ಳಲಿದ್ದಾರೆ. ಭಾರತದ ಪ್ರತಿಭಾನ್ವಿತ ಕುಸ್ತಿಪಟು ಅಮನ್ ಸೆಹ್ರಾವತ್ ಮತ್ತು ನಿಶಾ ದಹಿಯಾ ಅವರು, ಟರ್ಕಿಯ ಇಸ್ತಾನ್ ಬುಲ್‌ನಲ್ಲಿ ನಡೆದ ವಿಶ್ವ ಒಲಿಂಪಿಕ್ ಅರ್ಹತಾ ಪಂದ್ಯಗಳಲ್ಲಿ ಗೆದ್ದು ಪ್ಯಾರಿಸ್ ಒಲಿಂಪಿಕ್ ೨೦೨೪ ಕ್ಕೆ ಅರ್ಹತೆ ಪಡೆದಿದ್ದಾರೆ. ಇದಕ್ಕೂ ಮೊದಲು, ೫೦ ಕೆ.ಜಿ ವಿಭಾಗದಲ್ಲಿ ವಿನೇಶ್ ಫೋಗಟ್, ೫೩ ಕೆ.ಜಿಯಲ್ಲಿ ಆಂಟಿಮ್ ಪಂಗಲ್, ೫೭ ಕೆಜಿಯಲ್ಲಿ ಅಂಶು ಮಲಿಕ್ ಮತ್ತು ೭೬ ಕೆಜಿ ವಿಭಾಗದಲ್ಲಿ ರೀತಿಕಾ ಹೂಡಾ ಈಗಾಗಲೇ ವಿವಿಧ ಅರ್ಹತಾ ಸ್ಪರ್ಧೆಗಳಲ್ಲಿ ಪ್ಯಾರಿಸ್ ಗೇಮ್ಸ್‌ಗೆ ಅರ್ಹತೆ ಪಡೆದಿದ್ದಾರೆ.

<><*<><>*><>

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ನಡುವೆ ನಿನ್ನೆ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ೪೭ ರನ್ ಗೆಲುವು ಸಾಧಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>